I/744499/2025

**<u>ಕರ್ನಾಟಕ ಸರ್ಕಾರದ ನಡವಳಿಗಳು</u>**

**ವಿಷಯ:** 2025 ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಆಇ 10 (ಇ) ಸೇನಿಸೇ 2023, ದಿನಾಂಕ:21.12.2023.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ: 21.12.2023 ರ ಸರ್ಕಾರಿ ಆದೇಶದಲ್ಲಿ 2024 ನೇ ಸಾಲಿನ ಬ್ಲಾಕ್ ಅವಧಿಗೆ ಸರ್ಕಾರಿ ಅಧಿಕಾರಿ/ನೌಕರರು ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗತಿಗಳಿಗೊಳಪಟ್ಟು ಗಳಿಕೆ ರಜೆ ಅಧ್ಯರ್ಪಿಸಿ ನಗದೀಕರಣ ಪಡೆಯಲು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118(2)(i) ರನ್ವಯ ಅವಕಾಶ ಕಲ್ಪಿಸಲಾಗಿತ್ತು. ಸದರಿ ಬ್ಲಾಕ್ ಅವಧಿಯು ದಿನಾಂಕ:31/12/2024 ರಂದು ಮುಕ್ತಾಯಗೊಳ್ಳುವ ಹಿನ್ನೆಲೆಯಲ್ಲಿ ಸರ್ಕಾರವು 2025 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ 15 ದಿನ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜೆ ವೇತನಕ್ಕೆ ಸಮಾನವಾಗಿ ನಗದೀಕರಣ ಪಡೆಯುವ ಅವಕಾಶವನ್ನು ಸರ್ಕಾರಿ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಅಧೀನದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿಸಿದ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗೊಳಪಟ್ಟು ನಿಯತಗೊಳಿಸಲು ಅವಕಾಶವನ್ನು ಕಲ್ಪಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ: ಆಇ 03 ಸೇನಿಸೇ 2024 ಬೆಂಗಳೂರು, ದಿನಾಂಕ: 17.1.2025</u>**

2025 ನೇ ಸಾಲಿನ ಬ್ಲಾಕ್ ಅವಧಿಗೆ ಎಲ್ಲಾ ವೃಂದದ ರಾಜ್ಯ ಸರ್ಕಾರಿ ಅಧಿಕಾರಿ/ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗತಿಗಳಿಗೊಳಪಟ್ಟು ಗರಿಷ್ಠ 15 ದಿನಗಳಿಗೆ ಮೀರದಂತೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯವನ್ನು ಜಾರಿಗೊಳಿಸಿ ಆದೇಶಿಸಿದೆ.

ಈ ಸೌಲಭ್ಯವು ದಿನಾಂಕ:1/1/2025 ರಿಂದ 31/12/2025 ರ ವರೆಗೆ ಜಾರಿಯಲ್ಲಿರುತ್ತದೆ. ಈ ಸೌಲಭ್ಯವನ್ನು ಎಲ್ಲಾ ವೃಂದದ ಅರ್ಹ ಸರ್ಕಾರಿ ಅಧಿಕಾರಿ/ನೌಕರರು ಒಂದು ತಿಂಗಳ ಮುಂಚಿತವಾಗಿ ಮನವಿ ನೀಡಿ ಅವರ ಇಚ್ಛೆಯ ಯಾವುದೇ ತಿಂಗಳಿನಲ್ಲಿ ಗಳಿಕೆ ರಜೆ ನಗದೀಕರಣ ಸೌಲಭ್ಯ ಪಡೆಯಬಹುದಾಗಿದೆ.

ಗೆಜೆಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2025 ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ ಹೆಚ್‌ಆರ್‌ಎಂಎಸ್‌ನಲ್ಲಿ ಲಭ್ಯವಿರುವಂತೆ ಅಧಿಕಾರಿಗಳ ಗಳಿಕೆ ರಜೆ

ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದ್ದು.

ಮುಂದುವರೆದು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118 ರಲ್ಲಿ ನಿಗದಿಪಡಿಸಿರುವ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Signed by Ajay Korade
Date: 17-01-2025 16:11:05
Reason: Approved

**( ಅಜಯ್ ಎಸ್. ಕೊರಡೆ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)
ದೂ:080-22033135

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

**ಪ್ರತಿ ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು-560001.
3. ಮಹಾಲೇಖಪಾಲರು (A&E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ:5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

8. ರೆಸಿಡೆಂಟ್ ಕಮಿಷನರ್, ಕರ್ನಾಟಕ ಭವನ, ನವದೆಹಲಿ.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
11. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
14. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
19. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
23. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ/ಶಾಖೆಯ ರಕ್ಷಾ ಕಡತ.

(ಕ್ರಮ ಸಂಖ್ಯೆ:1 ರಿಂದ 24 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ)

ಈ ಅದೇಶವನ್ನು ಕರ್ನಾಟಕ ಸರ್ಕಾರದ ಅಧಿಕೃತ ಜಾಲತಾಣ www.finance.karnataka.gov.in ಇಲ್ಲಿ ವೀಕ್ಷಿಸಬಹುದಾಗಿದೆ.